ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 364
ಉತ್ತರಿಸಬೇಕಾದ ದಿನಾಂಕ : 06.03.2020
ಸದಸ್ಯರ ಹೆಸರು : ಶ್ರೀ ತಿಪ್ಪಣ್ಣ ಕಮಕನೂರ (ನಾಮನಿರ್ದೇಶನ ಹೊಂದಿದವರು)
ಉತ್ತರಿಸುವ ಸಚಿವರು : ಮಾನ್ಯ ಪ್ರವಾಸೋದ್ಯಮ ಮತ್ತು ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು

ಕ್ರಸಂ	ಪ್ರಶ್ನೆ	ಉತ್ತರ
ಅ)	ವಿಭಾಗೀಯ ಕೇಂದ್ರವಾಗಿರುವ ಕಲಬುರಗಿಯಲ್ಲಿ ಅಂತಾರಾಷ್ಟ್ರೀಯ ಮಟ್ಟದ ಕ್ರೀಡಾಂಗಣ ನಿರ್ಮಾಣ ಮಾಡಬೇಕೆಂಬ ಬೇಡಿಕೆ ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.
ಆ)	ಕರ್ನಾಟಕ ರಾಜ್ಯ ಕ್ರಿಕೆಟ್ ಮಂಡಳಿ ಈ ನಿಟ್ಟಿನಲ್ಲಿ ತನ್ನ ಒಪ್ಪಿಗೆ ಸೂಚಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ಮಾಹಿತಿ ನೀಡುವುದು)	ಕಲ್ಬುರ್ಗಿಯಲ್ಲಿ ಸೂಕ್ತವಾದ ನಿವೇಶನವನ್ನು ಖರೀದಿ ಅಥವಾ ಕನಿಷ್ಟ 30 ವರ್ಷಗಳ ಲೀಸ್ ಆಧಾರದಲ್ಲಿ ಒದಗಿಸಿದಲ್ಲಿ ಕ್ರಿಕೆಟ್ ಕ್ರೀಡಾ ಸೌಲಭ್ಯಗಳನ್ನು ಅಭಿವೃದ್ಧಿಪಡಿಸಲು ಸಿದ್ಧವಿರುವುದಾಗಿ ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆಯು ಒಪ್ಪಿಗೆ ಸೂಚಿಸಿದೆ.
ಇ)	ಹೊಸ ಕ್ರಿಕೆಟ್ ಕ್ರೀಡಾಂಗಣ ನಿರ್ಮಾಣಕ್ಕಾಗಿ ಜಮೀನು ಗುರುತಿಸಲಾಗಿದೆಯೇ; ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?	ಹೊಸ ಕ್ರಿಕೆಟ್ ಕ್ರೀಡಾಂಗಣ ನಿರ್ಮಾಣಕ್ಕೆ ಸೂಕ್ತವಾದ ನಿವೇಶನವನ್ನು ಗುರುತಿಸಲು ಜಿಲ್ಲಾಡಳಿತದಿಂದ ಕ್ರಮ ವಹಿಸಲಾಗಿದ್ದು, ಇದುವರೆಗೆ ಸೂಕ್ತವಾದ ನಿವೇಶನ ಲಭ್ಯವಾಗಿರುವುದಿಲ್ಲ.

ವೈಎಸ್ ಡಿ-/ಇಬಿಬಿ/16/2020

(ಸಿ. ಟಿ. ರವಿ)
ಪ್ರವಾಸೋದ್ಯಮ ಮತ್ತು ಕನ್ನಡ ಮತ್ತು ಸಂಸ್ಕೃತಿ
ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು.